◆ ADVT ◆
ಇಲ್ಲಿ ಜಾಹೀರಾತು
98700 06472 · need24.digital

NEED24 NEWS
हर ख़बर, हर शहर

ನೀಡ್ 24 ನ್ಯೂಸ್

ಪ್ರತಿ ಸುದ್ದಿ, ಪ್ರತಿ ನಗರ

◆ ADVT ◆
ಇಲ್ಲಿ ಜಾಹೀರಾತು
98700 06472 · need24.digital

DIGITAL E-PAPER

PRGI APPLICATION UNDER PROCESS
Application No. T/GJ/2026/0619/2304/1577

GST
GSTIN 24CINPG0564Q1ZT

UDYAM REGISTERED
UDYAM-GJ-14-0003714


◆ DIGITAL NEWS NETWORK ◆
ಭಾರತದ ವಿಶ್ವಾಸಾರ್ಹ ಬಹುಭಾಷಾ ಡಿಜಿಟಲ್ ನ್ಯೂಸ್ ನೆಟ್‌ವರ್ಕ್
11+ Languages | 24×7 Live | e-Paper Daily

ನಮ್ಮ App ಡೌನ್‌ಲೋಡ್ ಮಾಡಿ
Download on the App Store
GET IT ON Google Play

www.need24.digital
info@need24.in
+91 98700 06472
FOLLOW US:

तेज़ | सटीक | निष्पक्ष | जनहित में | सच की आवाज़ | जन-जन की आवाज़ | निडर पत्रकारिता

ಸಾದಾಪುರ ಗ್ರಾಮದಲ್ಲಿ ಶ್ರೀ ದ್ಯಾವಮ್ಮ ದೇವಿಯ ನೂತನ ದೇವಸ್ಥಾನ ಉದ್ಘಾಟನೆ - ದೇವಿಗೆ ಪೂಜೆ ಸಲ್ಲಿಸಿ ತಾಯಿ ದ್ಯಾವಮ್ಮ ದೇವಿಯ ಆಶೀರ್ವಾದ ಪಡೆದುಕೊಂಡೆ - ನಾಡಿನ ಜನತೆಗೆ ಸುಖ, ಶಾಂತಿ, ಸಮೃದ್ಧಿಗಾಗಿ ಪ್ರಾರ್ಥನೆ



ಸಾದಾಪುರ ಗ್ರಾಮದಲ್ಲಿ ಶ್ರೀ ದ್ಯಾವಮ್ಮ ದೇವಿಯ ನೂತನ ದೇವಸ್ಥಾನ ಉದ್ಘಾಟನೆ

ಸಾದಾಪುರ: ಇಂದು ಮಾನ್ವಿ ತಾಲೂಕಿನ ಸಾದಾಪುರ ಗ್ರಾಮದಲ್ಲಿ ಜರುಗಿದ ಶ್ರೀ ದ್ಯಾವಮ್ಮ ದೇವಿಯ ನೂತನ ದೇವಸ್ಥಾನದ ಉದ್ಘಾಟನಾ ಸಮಾರಂಭಕ್ಕೆ ತೆರಳಿ, ದೇವಿಗೆ ಪೂಜೆ ಸಲ್ಲಿಸಿ, ತಾಯಿ ದ್ಯಾವಮ್ಮ ದೇವಿಯ ಆಶೀರ್ವಾದ ಪಡೆದುಕೊಂಡೆ.

ತಾಯಿ ದ್ಯಾವಮ್ಮ ದೇವಿಯ ಕೃಪೆಯಿಂದ ನಾಡಿನ ಜನತೆಗೆ ಸುಖ, ಶಾಂತಿ, ಸಮೃದ್ಧಿ ಹಾಗೂ ಸಕಲ ಮಂಗಳ ಉಂಟಾಗಲಿ ಎಂದು ಪ್ರಾರ್ಥಿಸಿದೆ.

ಈ ಸಂದರ್ಭದಲ್ಲಿ ಸಾದಾಪುರ ಗ್ರಾಮದ ಹೈಕೋರ್ಟ್ ವಕೀಲರಾದ ವೆಂಕಟ ನರಸಿಂಹ ಗೌಡ, ಜೆಡಿಎಸ್ ತಾಲೂಕು ರೈತ ಘಟಕದ ಅಧ್ಯಕ್ಷರಾದ ಶರಣಪ್ಪಗೌಡ ಮದ್ಲಾಪುರ, ಪಕ್ಷದ ಹಿರಿಯ ಮುಖಂಡರಾದ ಮೌಲಾಸಾಬ್, ಜೆಡಿಎಸ್ ತಾಲೂಕು ಎಸ್.ಟಿ. ಘಟಕದ ಅಧ್ಯಕ್ಷರಾದ ವಿಜಯ ನಾಯಕ ಕೊಟ್ನೇಕಲ್, ಯುವ ಮುಖಂಡರಾದ ಅಮರೇಶ್ ಗೌಡ ಖರಾಬಾದಿನ್ನಿ, ನರಸಪ್ಪ ರಬ್ಬಣಕಲ್ ಸೇರಿದಂತೆ ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

— Ningappa

ಯುವಜನೋತ್ಸವದ ಸ್ಥಳ ಪರಿಶೀಲಿಸಿದ ಜಿಲ್ಲಾಧಿಕಾರಿಗಳು - ನವೆಂಬರ್ 29-30 ರಂದು ತುಮಕೂರಿನ ಅಮಾನಿಕೆರೆ ಗ್ಲಾಸ್ ಹೌಸ್‌ನಲ್ಲಿ ಯುವಜನೋತ್ಸವ - ವೇದಿಕೆ, ಮಳಿಗೆ, ಕುಡಿಯುವ ನೀರು, ಸ್ವಚ್ಛತೆ ವ್ಯವಸ್ಥೆ ಪರಿಶೀಲನೆ



ಯುವಜನೋತ್ಸವದ ಸ್ಥಳ ಪರಿಶೀಲಿಸಿದ ಜಿಲ್ಲಾಧಿಕಾರಿಗಳು

ತುಮಕೂರು: ಇದೇ ನವೆಂಬರ್ 29 ಮತ್ತು 30 ರಂದು ತುಮಕೂರಿನ ಅಮಾನಿಕೆರೆ ಗ್ಲಾಸ್ ಹೌಸ್‌ನಲ್ಲಿ ನಡೆಯಲಿರುವ ಯುವಜನೋತ್ಸವದ ಸಿದ್ಧತೆಗಳ ಕುರಿತು ಮಾನ್ಯ ಜಿಲ್ಲಾಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಕಾರ್ಯಕ್ರಮದ ವೇದಿಕೆ ನಿರ್ಮಾಣ, ವಿವಿಧ ಇಲಾಖೆಗಳ ಮಳಿಗೆಗಳು, ಶಾಪಿಂಗ್ ಸ್ಟಾಲ್‌ಗಳು, ಚಾಟ್ಸ್ ಹಾಗೂ ಸಸ್ಯಾಹಾರಿ ಆಹಾರ ಮಳಿಗೆಗಳ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಕಾರ್ಯಕ್ರಮಕ್ಕೆ ಆಗಮಿಸುವ ಯುವಜನತೆ ಹಾಗೂ ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯ, ಕುಡಿಯುವ ನೀರು, ವಿದ್ಯುತ್ ಮತ್ತು ಸ್ವಚ್ಛತಾ ವ್ಯವಸ್ಥೆಗಳನ್ನು ಸಮರ್ಪಕವಾಗಿ ಕಲ್ಪಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪನಿರ್ದೇಶಕರು ಉಪಸ್ಥಿತರಿದ್ದರು.

— Ningappa

ಕುರಣಿ, ಉಳ್ಳಾಗಡ್ಡಿ ಖಾನಾಪುರ ಗ್ರಾಮಗಳಲ್ಲಿ 1.36 ಕೋಟಿ ರೂ. ವೆಚ್ಚದ 3 ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ - ಬೆಳಗಾವಿ ಡಿಸಿಸಿ ಬ್ಯಾಂಕ್ ನಿರ್ದೇಶಕ ರಾಹುಲ್ ಅಣ್ಣಾ ಜಾರಕಿಹೊಳಿ ಅವರಿಂದ ಚಾಲನೆ - 2 ರಸ್ತೆ ಡಾಂಬರೀಕರಣ, ಶಾಲೆಯಲ್ಲಿ 2 ನೂತನ ಕೊಠಡಿ ನಿರ್ಮಾಣ



ಯಮಕನಮರಡಿ: ಇದೇ ನ.18ರಂದು ಬೆಳಗಾವಿ ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ರಾಹುಲ್ ಜಾರಕಿಹೊಳಿ ಅವರು ಯಮಕನಮರಡಿ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಭಾಗದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡುವ ನಿಟ್ಟಿನಲ್ಲಿ, ಕುರಣಿ ಹಾಗೂ ಉಳ್ಳಾಗಡ್ಡಿ ಖಾನಾಪುರ ಗ್ರಾಮಗಳಲ್ಲಿ ಒಟ್ಟು 1.36 ಕೋಟಿ ರೂ. ವೆಚ್ಚದ ಮೂರು ಮಹತ್ವದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಕುರಣಿ ಗ್ರಾಮದಲ್ಲಿ ಹಂಚಿನಾಳ ಸಂಪರ್ಕ ರಸ್ತೆಯ ಡಾಂಬರೀಕರಣಕ್ಕೆ 50 ಲಕ್ಷ ರೂ., ಉಳ್ಳಾಗಡ್ಡಿ ಖಾನಾಪುರ ಗ್ರಾಮದ ಗಟ್ಟಿಗಿ ತೋಟದ ರಸ್ತೆ ಡಾಂಬರೀಕರಣಕ್ಕೆ 50 ಲಕ್ಷ ರೂ. ಹಾಗೂ ಉಳ್ಳಾಗಡ್ಡಿ ಖಾನಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 36 ಲಕ್ಷ ರೂ. ವೆಚ್ಚದಲ್ಲಿ ಎರಡು ನೂತನ ಕೊಠಡಿಗಳ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು.

ಈ ಕಾಮಗಾರಿಗಳು ಪೂರ್ಣಗೊಂಡ ಬಳಿಕ ಗ್ರಾಮೀಣ ಭಾಗದ ರಸ್ತೆ ಸಂಪರ್ಕ ಸುಧಾರಿಸುವುದರ ಜೊತೆಗೆ, ವಿದ್ಯಾರ್ಥಿಗಳಿಗೆ ಉತ್ತಮ ಕಲಿಕಾ ವಾತಾವರಣ ಕಲ್ಪಿಸಲು ಸಹಕಾರಿಯಾಗಲಿವೆ. ಗ್ರಾಮೀಣ ಮೂಲಸೌಕರ್ಯಗಳ ಬಲವರ್ಧನೆ ಹಾಗೂ ಶೈಕ್ಷಣಿಕ ಅಭಿವೃದ್ಧಿಗೆ ಈ ಯೋಜನೆಗಳು ಮಹತ್ವದ ಕೊಡುಗೆ ನೀಡಲಿವೆ.

ಜನಪ್ರಿಯ ಶಾಸಕರಾದ ಶ್ರೀ ಸತೀಶ್ ಜಾರಕಿಹೊಳಿ ಅವರ ಮಾರ್ಗದರ್ಶನ ಹಾಗೂ ಅಭಿವೃದ್ಧಿಪರ ಚಿಂತನೆಯೊಂದಿಗೆ, ಜನರ ಅಗತ್ಯಗಳಿಗೆ ಸ್ಪಂದಿಸುತ್ತಾ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಪ್ರತಿಯೊಂದು ಗ್ರಾಮದ ಸಮಗ್ರ ಅಭಿವೃದ್ಧಿಗಾಗಿ ನಮ್ಮ ಪ್ರಯತ್ನ ನಿರಂತರವಾಗಿ ಮುಂದುವರಿಯಲಿದೆ.

— Ningappa

ಇಲಕಲ್ ನಗರದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರದತ್ತ ಮಹತ್ವದ ಹೆಜ್ಜೆ - ಅಮೃತ್ 2.0 ಯೋಜನೆಯಡಿ 37 ಕೋಟಿ ರೂ. ವೆಚ್ಚದ ಸುಧಾರಿತ ಕುಡಿಯುವ ನೀರು ಸರಬರಾಜು ಯೋಜನೆಗೆ ಸಚಿವ ವಿಜಯಾನಂದ ಕಾಶಪ್ಪನವರ ಅವರಿಂದ ಭೂಮಿಪೂಜೆ



ಇಲಕಲ್: ಇಲಕಲ್ ನಗರದ ಜನತೆಗೆ ನಿರಂತರ ಹಾಗೂ ಸಮರ್ಪಕ ಕುಡಿಯುವ ನೀರು ಒದಗಿಸುವ ಸಂಕಲ್ಪದೊಂದಿಗೆ, ಅಮೃತ್ 2.0 ಯೋಜನೆಯಡಿ 37 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿರುವ ಸುಧಾರಿತ ಕುಡಿಯುವ ನೀರು ಸರಬರಾಜು ಯೋಜನೆಗೆ ಸಚಿವ ವಿಜಯಾನಂದ ಕಾಶಪ್ಪನವರು ಭೂಮಿಪೂಜೆ ನೆರವೇರಿಸಿದರು.

ಹುನಗುಂದ ಮತಕ್ಷೇತ್ರದ ಅಭಿವೃದ್ಧಿಯೇ ನನ್ನ ಮೊದಲ ಆದ್ಯತೆ. ಕ್ಷೇತ್ರದ ಜನರ ಮೂಲಭೂತ ಅಗತ್ಯಗಳನ್ನು ಈಡೇರಿಸುವ ನಿಟ್ಟಿನಲ್ಲಿ ನಿರಂತರವಾಗಿ ಶ್ರಮಿಸುತ್ತಿದ್ದು, ಇಲಕಲ್ ನಗರದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವುದು ನಮ್ಮ ಬದ್ಧತೆಯಾಗಿದೆ.

ನಮ್ಮ ಕುಟುಂಬ ಸದಾ ಕ್ಷೇತ್ರದ ಅಭಿವೃದ್ಧಿಗೆ ಬದ್ಧವಾಗಿದೆ. ಜನರ ಆಶೋತ್ತರಗಳಿಗೆ ಸ್ಪಂದಿಸುತ್ತಾ, ಅಭಿವೃದ್ಧಿಯ ಪಥದಲ್ಲಿ ಹುನಗುಂದ ಮತಕ್ಷೇತ್ರವನ್ನು ಮುನ್ನಡೆಸುವ ನನ್ನ ಪ್ರಯತ್ನ ನಿರಂತರವಾಗಿರಲಿದೆ.

ಈ ಯೋಜನೆಯ ಅನುಷ್ಠಾನದಿಂದ ಇಲಕಲ್ ನಗರದ ಜನತೆಗೆ ಶುದ್ಧ ಹಾಗೂ ಸಮರ್ಪಕ ಕುಡಿಯುವ ನೀರು ಲಭ್ಯವಾಗುವ ವಿಶ್ವಾಸವಿದೆ ಎಂದರು.

— Ningappa

ಹನುಮಸಾಗರದ ಕೆ.ಪಿ.ಎಸ್. ಬಾಲಕರ ಜಿ.ಎಂ.ಎಚ್.ಎಸ್. ಶಾಲೆಯಲ್ಲಿ ನೂತನ ಕೊಠಡಿಗಳ ಉದ್ಘಾಟನೆ - ದೊಡ್ಡನಗೌಡ ಹೆಚ್ ಪಾಟೀಲ್ ಅವರಿಂದ ವಿದ್ಯಾರ್ಥಿಗಳಿಗೆ ಸಮರ್ಪಣೆ - ಶಿಕ್ಷಣದ ಬೆಳವಣಿಗೆಯೇ ಸಮಾಜದ ಪ್ರಗತಿಗೆ ಭದ್ರ ಬುನಾದಿ



ಹನುಮಸಾಗರದ ಕೆ.ಪಿ.ಎಸ್. ಬಾಲಕರ ಜಿ.ಎಂ.ಎಚ್.ಎಸ್. ಶಾಲೆಯಲ್ಲಿ ನೂತನ ಕೊಠಡಿಗಳ ಉದ್ಘಾಟನೆ

ಹನುಮಸಾಗರ:

ಹನುಮಸಾಗರದ ಕೆ.ಪಿ.ಎಸ್. ಬಾಲಕರ ಜಿ.ಎಂ.ಎಚ್.ಎಸ್. ಶಾಲೆಯಲ್ಲಿ ನೂತನವಾಗಿ ನಿರ್ಮಿಸಲಾದ ಕೊಠಡಿಗಳನ್ನು ದೊಡ್ಡನಗೌಡ ಹೆಚ್ ಪಾಟೀಲ್ ಅವರು ಉದ್ಘಾಟಿಸಿ, ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ಸಮರ್ಪಿಸಿದರು.

ಶಿಕ್ಷಣ ಕ್ಷೇತ್ರದ ಅಭಿವೃದ್ಧಿ ಹಾಗೂ ವಿದ್ಯಾರ್ಥಿಗಳಿಗೆ ಉತ್ತಮ ಕಲಿಕಾ ವಾತಾವರಣ ಕಲ್ಪಿಸುವುದು ನಮ್ಮ ಆದ್ಯತೆಯಾಗಿದೆ. ಶಾಲೆಗಳಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವ ಮೂಲಕ ಗುಣಮಟ್ಟದ ಶಿಕ್ಷಣಕ್ಕೆ ಪೂರಕ ವಾತಾವರಣ ನಿರ್ಮಿಸಲು ಸದಾ ಬದ್ಧನಾಗಿದ್ದೇನೆ ಎಂದರು.

ಇದೇ ಸಂದರ್ಭದಲ್ಲಿ ಆಯೋಜಿಸಲಾಗಿದ್ದ ಗೌರವ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ, ಆತ್ಮೀಯವಾಗಿ ಗೌರವಿಸಿ ಶಾಲೆಯ ಆಡಳಿತ ಮಂಡಳಿ, ಶಿಕ್ಷಕ ವೃಂದ ಹಾಗೂ ಗಣ್ಯರಿಗೆ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸಿದರು.

ಶಿಕ್ಷಣದ ಬೆಳವಣಿಗೆಯೇ ಸಮಾಜದ ಪ್ರಗತಿಗೆ ಭದ್ರ ಬುನಾದಿ.

— Ningappa

ಜನನುಡಿ 2026 ಕಾರ್ಯಕ್ರಮ ಸಭೆ ಹಾಗೂ ಪೋಸ್ಟರ್ ಬಿಡುಗಡೆ @ಧಾರವಾಡ - ನವೆಂಬರ್ 28-29 ರಂದು ಮಂಗಳೂರಿನಲ್ಲಿ ಜನನುಡಿ - ಡಾ. ಕೆ.ಆರ್ ದುರ್ಗಾದಾಸ್ ಅಧ್ಯಕ್ಷತೆಯಲ್ಲಿ ಸಭೆ



ಜನನುಡಿ 2026 ಕಾರ್ಯಕ್ರಮ ಸಭೆ ಹಾಗೂ ಪೋಸ್ಟರ್ ಬಿಡುಗಡೆ

ಧಾರವಾಡ: ಧಾರವಾಡದ ಕನ್ನಡ ಸಾಹಿತ್ಯ ಪರಿಷತ್ತು ಸಭಾಂಗಣದಲ್ಲಿ ಇಂದು ಇದೇ ನವೆಂಬರ್ 28-29 ರಂದು ಮಂಗಳೂರಿನಲ್ಲಿ ನಡೆಯಲಿರುವ ಜನನುಡಿ ಕುರಿತು ಸಭೆ ಹಾಗೂ ಪೋಸ್ಟರ್ ಬಿಡುಗಡೆ ಕಾರ್ಯಕ್ರಮ ನಡೆಯಿತು.

ಜನನುಡಿ 2026 ಕಾರ್ಯಕ್ರಮ ಸಭೆ ಹಾಗೂ ಪೋಸ್ಟರ್ ಬಿಡುಗಡೆ @ಧಾರವಾಡ - ನವೆಂಬರ್ 28-29 ರಂದು ಮಂಗಳೂರಿನಲ್ಲಿ ಜನನುಡಿ - ಡಾ. ಕೆ.ಆರ್ ದುರ್ಗಾದಾಸ್ ಅಧ್ಯಕ್ಷತೆಯಲ್ಲಿ ಸಭೆ



ಜನನುಡಿ 2026 ಕಾರ್ಯಕ್ರಮ ಸಭೆ ಹಾಗೂ ಪೋಸ್ಟರ್ ಬಿಡುಗಡೆ

ಧಾರವಾಡ: ಧಾರವಾಡದ ಕನ್ನಡ ಸಾಹಿತ್ಯ ಪರಿಷತ್ತು ಸಭಾಂಗಣದಲ್ಲಿ ಇಂದು ಇದೇ ನವೆಂಬರ್ 28-29 ರಂದು ಮಂಗಳೂರಿನಲ್ಲಿ ನಡೆಯಲಿರುವ ಜನನುಡಿ ಕುರಿತು ಸಭೆ ಹಾಗೂ ಪೋಸ್ಟರ್ ಬಿಡುಗಡೆ ಕಾರ್ಯಕ್ರಮ ನಡೆಯಿತು.

ಸಭೆಯ ಅಧ್ಯಕ್ಷತೆಯನ್ನು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯ ನಿವೃತ್ತ ಕುಲಸಚಿವರಾದ ಡಾ. ಕೆ.ಆರ್ ದುರ್ಗಾದಾಸ್ ಅವರು ವಹಿಸಿದ್ದರು. ಜನನುಡಿ ಕಾರ್ಯಕ್ರಮದ ಕುರಿತು ಸಂಘಟಕರಾದ ಮುನೀರ್ ಕಾಟಿಪಳ್ಳ, ಕವಿವಿ ಗಾಂಧಿ ಅಧ್ಯಯನ ಪೀಠದ ನಿವೃತ್ತ ಅಧ್ಯಕ್ಷರಾದ ಡಾ. ಶಿವಾನಂದ ಶೆಟ್ಟರ, ಲಡಾಯಿ ಪ್ರಕಾಶನದ ಬಸವರಾಜ ಸೂಳಿಬಾವಿ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷರಾದ ಡಾ. ಲಿಂಗರಾಜ ಅಂಗಡಿ, ಹಿರಿಯ ಕಾರ್ಮಿಕ ಮುಖಂಡರಾದ ಬಿ.ಎನ್ ಪೂಜಾರಿ, ಚಿಂತಕರಾದ ಎಚ್.ಜಿ ದೇಸಾಯಿ, ಯುವ ಚಿಂತಕರಾದ ಡಾ. ರಾಘವೇಂದ್ರ ಪಾಟೀಲ ಮಾತನಾಡಿದರು.

ಈ ಸಂದರ್ಭದಲ್ಲಿ ಪ್ರಗತಿಪರ ಸಂಘಟನೆಗಳ ಮುಖಂಡರಾದ ಮಹೇಶ ಪತ್ತಾರ, ಎ.ಎಂ ಖಾನ್, ಬಸವರಾಜ ಪೂಜಾರ, ಪ್ರೇಮಾ ನಡುವಿನಮನಿ, ಕೆ.ಎಸ್ ಕೌಜಲಗಿ, ಕೆ.ಎಚ್ ಪಾಟೀಲ, ಗೌಸ್ ಪೀರಣ್ಣನವರ, ಡಿ. ಸ್ಯಾಮ್ಸನ್, ಕೃಷ್ಣಾ ರಾಠೋಡ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

— Ningappa

ಭಾರತ್ ಜೋಡೋ ಯುವ ಸಂಘಗಳ ನೋಂದಣಿ ಪ್ರಕ್ರಿಯೆ ತ್ವರಿತಗೊಳಿಸಲು ಜಿಲ್ಲಾಧಿಕಾರಿಗಳ ಸೂಚನೆ - ಗೂಗಲ್ ಮೀಟ್ ಮೂಲಕ ತಾಲ್ಲೂಕುವಾರು ಪ್ರಗತಿ ಪರಿಶೀಲನೆ - ಬಾಕಿ ಅರ್ಜಿಗಳ ಶೀಘ್ರ ವಿಲೇವಾರಿಗೆ ನಿರ್ದೇಶನ



ತುಮಕೂರು: ಜಿಲ್ಲೆಯ ಭಾರತ್ ಜೋಡೋ ಯುವ ಸಂಘಗಳ ನೋಂದಣಿ ಪ್ರಕ್ರಿಯೆಯ ಪ್ರಗತಿ ಪರಿಶೀಲಿಸುವ ಉದ್ದೇಶದಿಂದ ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಗೂಗಲ್ ಮೀಟ್ ಮೂಲಕ ಪರಿಶೀಲನಾ ಸಭೆ ನಡೆಯಿತು.

ಸಭೆಯಲ್ಲಿ ತಾಲ್ಲೂಕುವಾರು ಯುವ ಸಂಘಗಳ ನೋಂದಣಿ ಪಟ್ಟಿ ಹಾಗೂ ನೋಂದಣಿ ಪ್ರಕ್ರಿಯೆಯ ಪ್ರಗತಿಯನ್ನು ಪರಿಶೀಲಿಸಲಾಯಿತು. ಇನ್ನೂ ನೋಂದಣಿಯಾಗದ ಯುವ ಸಂಘಗಳನ್ನು ಗುರುತಿಸಿ, ಅವುಗಳ ಸದಸ್ಯರ ವಿವರಗಳನ್ನು ಸಂಗ್ರಹಿಸಿ, ಅಗತ್ಯ ದಾಖಲೆಗಳನ್ನು ಪಡೆದು ನೋಂದಣಿ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು.

ಯುವ ಸಂಘಗಳ ನೋಂದಣಿಗೆ ಸಂಬಂಧಿಸಿದಂತೆ ಬಾಕಿ ಇರುವ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಬೇಕು. ನೋಂದಣಿ ಪ್ರಕ್ರಿಯೆಯಲ್ಲಿ ಯಾವುದೇ ವಿಳಂಬವಾಗದಂತೆ ತಾಲ್ಲೂಕುವಾರು ಪ್ರಗತಿಯನ್ನು ನಿರಂತರವಾಗಿ ಪರಿಶೀಲಿಸಿ, ನಿಗದಿತ ಕಾಲಮಿತಿಯೊಳಗೆ ಎಲ್ಲಾ ಅರ್ಹ ಯುವ ಸಂಘಗಳ ನೋಂದಣಿ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

— Ningappa

ಪರಿಹಾರಕ್ಕೆ ಕರ್ನಾಟಕ ಜನಪರ ಹೋರಾಟ ಸಮಿತಿಯಿಂದ ಪುರಸಭೆ ಅಧಿಕಾರಿಗಳಿಗೆ ತೀವ್ರ ಒತ್ತಾಯ - 8 ನೀರಿನ ಗೊಮ್ಮೆ ದುರಸ್ತಿ, ಎಲ್‌ಇಡಿ ಬೀದಿ ದೀಪ ಅಳವಡಿಕೆಗೆ ಆಗ್ರಹ - ನಾಳೆಯಿಂದಲೇ ದೀಪ ಅಳವಡಿಕೆ ಕಾರ್ಯಕ್ಕೆ ಚಾಲನೆಗೆ ಭರವಸೆ



5ನೇ ವಾರ್ಡಿನ ಸಮಸ್ಯೆಗಳ ಪರಿಹಾರಕ್ಕೆ ಕರ್ನಾಟಕ ಜನಪರ ಹೋರಾಟ ಸಮಿತಿಯಿಂದ ಪುರಸಭೆ ಅಧಿಕಾರಿಗಳಿಗೆ ತೀವ್ರ ಒತ್ತಾಯ

ಲಿಂಗಸುಗೂರು, ನವೆಂಬರ್ 18:

ಕರ್ನಾಟಕ ಜನಪರ ಹೋರಾಟ ಸಮಿತಿ, ಲಿಂಗಸುಗೂರು ತಾಲೂಕು ಸಮಿತಿಯಿಂದ ಇಂದು ಪುರಸಭೆಯ ಅಧಿಕಾರಿಗಳನ್ನು ಭೇಟಿಯಾಗಿ 5ನೇ ವಾರ್ಡಿನ ಮೂಲಭೂತ ಸೌಕರ್ಯಗಳ ಸಮಸ್ಯೆಗಳನ್ನು ಶೀಘ್ರವಾಗಿ ಬಗೆಹರಿಸುವಂತೆ ಮೌಖಿಕವಾಗಿ ಬಲವಾದ ಒತ್ತಾಯ ಮಾಡಲಾಯಿತು.

ಸುಮಾರು ಎರಡು ತಿಂಗಳ ಹಿಂದೆ ನಮ್ಮ ಸಮಿತಿಯಿಂದ ಪುರಸಭೆಗೆ ಮನವಿ ಸಲ್ಲಿಸಲಾಗಿತ್ತು. ಆ ಮನವಿಯ ಪರಿಣಾಮವಾಗಿ ಎರಡು ವಾರಗಳ ಹಿಂದೆ ಪುರಸಭೆಯ ಪೌರಕಾರ್ಮಿಕರಿಂದ ವಾರ್ಡಿನಲ್ಲಿ ಚರಂಡಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಗಿತ್ತು.

ಆದರೆ, ನಮ್ಮ ಮನವಿಯಲ್ಲಿ ಪ್ರಮುಖವಾಗಿ ಉಲ್ಲೇಖಿಸಿದ್ದ 5ನೇ ವಾರ್ಡಿನ ಎಂಟು ನೀರಿನ ಗೊಮ್ಮೆಗಳನ್ನು ದುರಸ್ತಿಗೊಳಿಸಿ ಸಾರ್ವಜನಿಕರ ಬಳಕೆಗೆ ಚಾಲನೆ ನೀಡುವುದು ಹಾಗೂ ವಾರ್ಡಿನ ಎಲ್ಲಾ ರಸ್ತೆಗಳಲ್ಲಿ ಹೊಸ ಎಲ್‌ಇಡಿ ಬೀದಿ ದೀಪಗಳನ್ನು ಅಳವಡಿಸುವುದು ಸೇರಿದಂತೆ ಹಲವು ಬೇಡಿಕೆಗಳು ಇನ್ನೂ ಈಡೇರಿಲ್ಲ.

ಈ ಹಿನ್ನೆಲೆಯಲ್ಲಿ ಇಂದು ಸಮಿತಿಯ ಪದಾಧಿಕಾರಿಗಳು ಅಧಿಕಾರಿಗಳನ್ನು ತೀವ್ರವಾಗಿ ಪ್ರಶ್ನಿಸಿ, ತಕ್ಷಣವೇ ತಾತ್ಕಾಲಿಕವಾಗಿ ಕನಿಷ್ಠ ಎರಡು-ಮೂರು ನೀರಿನ ಗೊಮ್ಮೆಗಳನ್ನು ಚಾಲನೆಗೊಳಿಸಬೇಕು ಹಾಗೂ 5ನೇ ವಾರ್ಡಿನ ಎಲ್ಲಾ ಪ್ರದೇಶಗಳಲ್ಲಿ ಬೀದಿ ದೀಪಗಳನ್ನು ಅಳವಡಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಅಧಿಕಾರಿಗಳಾದ ಶಿವಲಿಂಗ ಸರ್ ಹಾಗೂ ಬಸವರಾಜ್ ಜೈ ಅವರು ಸಮಿತಿಯ ಮನವಿಗೆ ಸ್ಪಂದಿಸಿ, ನಾಳೆಯಿಂದಲೇ ಬೀದಿ ದೀಪಗಳ ಅಳವಡಿಕೆ ಕಾರ್ಯಕ್ಕೆ ಚಾಲನೆ ನೀಡಲಾಗುವುದು ಹಾಗೂ ವಾರ್ಡಿನ ಎಲ್ಲಾ ಸಮಸ್ಯೆಗಳನ್ನು ಹಂತ ಹಂತವಾಗಿ ಬಗೆಹರಿಸಲಾಗುವುದು ಎಂದು ಭರವಸೆ ನೀಡಿದರು.

ಸಮಿತಿಯ ಪ್ರಮುಖ ಒತ್ತಾಯಗಳು:

1. 5ನೇ ವಾರ್ಡಿನ ಎಂಟು ನೀರಿನ ಗೊಮ್ಮೆಗಳನ್ನು ದುರಸ್ತಿಗೊಳಿಸಿ ಚಾಲನೆ ನೀಡಬೇಕು.

2. ತಕ್ಷಣವೇ ಕನಿಷ್ಠ ಎರಡು-ಮೂರು ಗೊಮ್ಮೆಗಳನ್ನು ಸಾರ್ವಜನಿಕರ ಬಳಕೆಗೆ ಒದಗಿಸಬೇಕು.

3. ವಾರ್ಡಿನ ಎಲ್ಲಾ ರಸ್ತೆಗಳಲ್ಲಿ ಹೊಸ ಎಲ್‌ಇಡಿ ಬೀದಿ ದೀಪಗಳನ್ನು ಅಳವಡಿಸಬೇಕು.

4. ವಾರ್ಡಿನ ಬಾಕಿ ಉಳಿದಿರುವ ಮೂಲಭೂತ ಸೌಕರ್ಯಗಳ ಸಮಸ್ಯೆಗಳನ್ನು ಶೀಘ್ರವಾಗಿ ಬಗೆಹರಿಸಬೇಕು.

— Ningappa

ಚುನಾವಣೆಗಳಲ್ಲಿ ಸ್ಥಳೀಯರಿಗೆ ಆದ್ಯತೆ ನೀಡಿ - ಬೆಂಗಳೂರಿನಿಂದ ಬಂದು ಗೆದ್ದು ಮತ್ತೆ ಬೆಂಗಳೂರಿಗೆ ಹೋಗುವವರಿಗೆ ಅವಕಾಶ ಬೇಡ - ಹಣಬಲಕ್ಕಿಂತ ಜನಸೇವೆಗೆ ಮನ್ನಣೆ ನೀಡಿ - ಯುವಜನ ನಾಯಕ ಶಿವಪ್ಪ ಎನ್. ಅಂಬ್ಲಿಕಲ್ ಮನವಿ



ಮುಳಬಾಗಿಲು: ಮುಂಬರುವ ತಾಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಗಳಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ರಾಜಕೀಯ ಪಕ್ಷಗಳು ಸ್ಥಳೀಯ ಅಭ್ಯರ್ಥಿಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಯುವಜನ ನಾಯಕ ಶಿವಪ್ಪ ಎನ್. ಅಂಬ್ಲಿಕಲ್ ಮನವಿ ಮಾಡಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಕೆಲವರು ಕೇವಲ ಆರು ತಿಂಗಳು ಅಥವಾ ಒಂದು ವರ್ಷದ ಹಿಂದೆ ಬೆಂಗಳೂರಿನಿಂದ ಮುಳಬಾಗಿಲಿಗೆ ಬಂದು ಸಮಾಜಸೇವೆಯ ಹೆಸರಿನಲ್ಲಿ ಗುರುತಿಸಿಕೊಳ್ಳುತ್ತಾರೆ. ನಂತರ ತಾಲೂಕು ಪಂಚಾಯತ್ ಅಥವಾ ಜಿಲ್ಲಾ ಪಂಚಾಯತ್ ಚುನಾವಣೆಯ ಆಕಾಂಕ್ಷಿಗಳೆಂದು ಘೋಷಿಸಿಕೊಳ್ಳುತ್ತಾರೆ. ಚುನಾವಣೆಯಲ್ಲಿ ಗೆದ್ದು ಜನಪ್ರತಿನಿಧಿಗಳಾದ ಬಳಿಕ ಮತ್ತೆ ಬೆಂಗಳೂರಿಗೆ ಹೋಗುತ್ತಾರೆ. ನಂತರ ಜನರ ಸಮಸ್ಯೆಗಳಿಗೆ ಸ್ಪಂದಿಸುವುದಿಲ್ಲ. ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಜನರು ಬೆಂಗಳೂರಿನ ಮನೆಗಳಿಗೆ ಹುಡುಕಿಕೊಂಡು ಹೋದರೂ ಅವರನ್ನು ಭೇಟಿಯಾಗಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗುತ್ತಿದೆ.

ಜನಪ್ರತಿನಿಧಿಗಳು ಜನರ ನಡುವೆ ಇರಬೇಕು ಮತ್ತು ಜನರ ಕಷ್ಟ-ನೋವುಗಳಿಗೆ ಸ್ಪಂದಿಸಬೇಕು. ಸ್ಥಳೀಯ ಸಮಸ್ಯೆಗಳ ಬಗ್ಗೆ ಜನರೊಂದಿಗೆ ನಿರಂತರ ಸಂಪರ್ಕ ಮತ್ತು ಕ್ಷೇತ್ರದ ಅಭಿವೃದ್ಧಿಯ ಪರ ಕಾಳಜಿ ಅಭ್ಯರ್ಥಿಗಳ ಆಯ್ಕೆಗೆ ಪ್ರಮುಖ ಮಾನದಂಡಗಳಾಗಬೇಕು ಎಂದು ಅವರು ಹೇಳಿದ್ದಾರೆ.

ಮುಳಬಾಗಿಲು ತಾಲೂಕು ಪಂಚಾಯತ್ 21, ಜಿಲ್ಲಾ ಪಂಚಾಯತ್ 6 ಕ್ಷೇತ್ರಗಳಲ್ಲಿ ಸ್ಪರ್ಧಿಸಲು ಅನೇಕ ಯುವಕರು ಆಸಕ್ತಿ ತೋರಿಸುತ್ತಿದ್ದಾರೆ. ಇಂತಹ ಯುವ ಪ್ರತಿಭೆಗಳನ್ನು ಹಣಬಲದ ಕಾರಣಕ್ಕೆ ಕಡೆಗಣಿಸಬಾರದು.

ರಾಜಕೀಯ ಪಕ್ಷಗಳು ಹಣವಂತರಿಗೆ ಮಾತ್ರ ಅವಕಾಶ ನೀಡದೆ, ಜನರೊಂದಿಗೆ ಬೆರೆತು ಕೆಲಸ ಮಾಡುವ ಸ್ಥಳೀಯ ಯುವಕರಿಗೂ ಅವಕಾಶ ಕಲ್ಪಿಸಬೇಕು.

ನನ್ನ ಮನವಿ - ಅಭ್ಯರ್ಥಿಗಳ ಆಯ್ಕೆಯಲ್ಲಿ ಸ್ಥಳೀಯರಿಗೆ ಆದ್ಯತೆ ನೀಡಿ. ಯುವಕರಿಗೆ ಸ್ಪರ್ಧಿಸಲು ಅವಕಾಶ ಕಲ್ಪಿಸಿ. ಹಣಬಲಕ್ಕಿಂತ ಜನಸೇವೆಗೆ ಮನ್ನಣೆ ನೀಡಿ. ಆಯ್ಕೆಯಾದ ಜನಪ್ರತಿನಿಧಿಗಳು ಜನರ ನಡುವೆ ಇದ್ದು ಸಮಸ್ಯೆಗಳಿಗೆ ಸ್ಪಂದಿಸಲಿ ಎಂದು ಶಿವಪ್ಪ ಎನ್. ಅಂಬ್ಲಿಕಲ್ ಮನವಿ ಮಾಡಿದ್ದಾರೆ.

— Ningappa

ದೇವದುರ್ಗದಲ್ಲಿ ನವೆಂಬರ್ 19 ರಂದು ಬಸ್ ಡಿಪೋ ಮುತ್ತಿಗೆ - ತಾಲೂಕಿನ ಪ್ರತಿಯೊಂದು ಹಳ್ಳಿಗೆ ಬಸ್ ವ್ಯವಸ್ಥೆ ಕಲ್ಪಿಸಲು ಆಗ್ರಹಿಸಿ SFI ಹೋರಾಟ - ಮಹಾಲಿಂಗ ದೊಡ್ಡಮನಿ ನೇತೃತ್ವ



ದೇವದುರ್ಗದಲ್ಲಿ ನವೆಂಬರ್ 19 ರಂದು ಬಸ್ ಡಿಪೋ ಮುತ್ತಿಗೆ - ಪ್ರತಿಯೊಂದು ಹಳ್ಳಿಗೆ ಬಸ್ ವ್ಯವಸ್ಥೆಗೆ ಆಗ್ರಹ

ದೇವದುರ್ಗ: ಭಾರತ ವಿದ್ಯಾರ್ಥಿ ಫೆಡರೇಷನ್ ದೇವದುರ್ಗ ತಾಲೂಕು ಸಮಿತಿ ವತಿಯಿಂದ ನವೆಂಬರ್ 19-11-2026 ರಂದು ಬಸ್ ಡಿಪೋ ಮುತ್ತಿಗೆ ಹಮ್ಮಿಕೊಳ್ಳಲಾಗಿದೆ.

ತಾಲೂಕಿನ ಪ್ರತಿಯೊಂದು ಹಳ್ಳಿಗೆ ಬಸ್ಸಿನ ವ್ಯವಸ್ಥೆಯನ್ನು ಕಲ್ಪಿಸಲು ಆಗ್ರಹಿಸಿ ಈ ಹೋರಾಟವನ್ನು ಯಶಸ್ವಿಗೊಳಿಸೋಣ ಎಂದು ಕರೆ ನೀಡಿದ್ದಾರೆ.

— Ningappa

ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿ ವಾಲ್ಮೀಕಿ ಜಯಂತಿ - ಸಂಸದ ಕುಮಾರ್ ನಾಯಕ ಅವರಿಂದ ಭಾವಚಿತ್ರಕ್ಕೆ ಪುಷ್ಪನಮನ - ಸತ್ಯ, ಧರ್ಮ, ತ್ಯಾಗ, ಭ್ರಾತೃತ್ವ ಮೌಲ್ಯ ಅಳವಡಿಸಿಕೊಳ್ಳಲು ಕರೆ



ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿ ವಾಲ್ಮೀಕಿ ಜಯಂತಿ - ಸಂಸದ ಕುಮಾರ್ ನಾಯಕ ಅವರಿಂದ ಪುಷ್ಪನಮನ

ರಾಯಚೂರು:

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಆವರಣದಲ್ಲಿ ಇಂದು ಆಚರಿಸಲಾದ ಮಹರ್ಷಿ ವಾಲ್ಮೀಕಿ ಜಯಂತಿಯಲ್ಲಿ ರಾಯಚೂರು ಮತ್ತು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಕುಮಾರ್ ನಾಯಕ ಪಾಲ್ಗೊಂಡು, ಭಾವಚಿತ್ರಕ್ಕೆ ಪುಷ್ಪನಮನ ಅರ್ಪಿಸಿದರು.

ಬಳಿಕ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ಅವರು, ಮಹರ್ಷಿ ವಾಲ್ಮೀಕಿಯವರು ತಮ್ಮ ಜೀವನ, ಚಿಂತನೆ, ಮಹಾಕಾವ್ಯದ ಮೂಲಕ ನೀಡಿರುವ ಸಂದೇಶಗಳನ್ನು ನಾವು ದಿನನಿತ್ಯದ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ವಾಲ್ಮೀಕಿಯವರು ಪ್ರತಿಪಾದಿಸಿದ ಸತ್ಯ, ಧರ್ಮ, ತ್ಯಾಗ ಮತ್ತು ಭ್ರಾತೃತ್ವದ ಮೌಲ್ಯಗಳು ಇಂದು ಅತ್ಯಂತ ಪ್ರಸ್ತುತವಾಗಿದ್ದು, ಅವುಗಳನ್ನು ಅನುಸರಿಸುವುದೇ ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂಬುದನ್ನು ತಿಳಿಸಿದರು.

ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಶಿವಾನಂದ್ ಕೆಳಗಿನಮನಿ, ಕುಲಸಚಿವರಾದ ಡಾ. ಚನ್ನಪ್ಪ, ಮೌಲ್ಯಮಾಪನ ಕುಲಸಚಿವರಾದ ಪ್ರೊ. ವಿರೂಪಾಕ್ಷಯ್ಯ ಸೇರಿದಂತೆ ಆಡಳಿತ ಸಿಬ್ಬಂದಿ, ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

— Ningappa

ಕೋಚರಿ ಗ್ರಾಮದಲ್ಲಿ 2.50 ಕೋಟಿ ರೂ. ವೆಚ್ಚದ ಸೇತುವೆ, ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ - ಬೆಳಗಾವಿ ಡಿಸಿಸಿ ಬ್ಯಾಂಕ್ ನಿರ್ದೇಶಕ ರಾಹುಲ್ ಅಣ್ಣಾ ಜಾರಕಿಹೊಳಿ ಅವರಿಂದ ಚಾಲನೆ



ಕೋಚರಿ ಗ್ರಾಮದಲ್ಲಿ 2.50 ಕೋಟಿ ರೂ. ವೆಚ್ಚದ ಸೇತುವೆ, ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ

ಯಮಕನಮರಡಿ: ಬೆಳಗಾವಿ ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ರಾಹುಲ್ ಜಾರಕಿಹೊಳಿ ಅವರು ಯಮಕನಮರಡಿ ವಿಧಾನಸಭಾ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಯ ಸಂಕಲ್ಪದೊಂದಿಗೆ, ಕೋಚರಿ ಗ್ರಾಮದಲ್ಲಿ ಒಟ್ಟು 2.50 ಕೋಟಿ ರೂ. ವೆಚ್ಚದ ಎರಡು ಮಹತ್ವದ ಮೂಲಸೌಕರ್ಯ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಿದರು.

ಕಾಮಗಾರಿಗಳ ವಿವರ:


ಸೇತುವೆ ನಿರ್ಮಾಣ: ಲೋಕೋಪಯೋಗಿ ಇಲಾಖೆ ವತಿಯಿಂದ ಕೋಚರಿ ಗ್ರಾಮದ ಸಮೀಪ 2 ಕೋಟಿ ರೂ. ಅನುದಾನದಲ್ಲಿ ನೂತನ ಸೇತುವೆ ನಿರ್ಮಾಣ.

ಸ್ಥಳೀಯ ಮುಖಂಡರು, ಹಿರಿಯರು ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ಚಾಲನೆಗೊಂಡ ಈ ಯೋಜನೆಗಳು, ಗ್ರಾಮದ ಸಂಪರ್ಕ ವ್ಯವಸ್ಥೆಯನ್ನು ಬಲಪಡಿಸಿ ಜನರ ಸುಗಮ ಸಂಚಾರಕ್ಕೆ ಹೆಚ್ಚಿನ ಅನುಕೂಲ ಕಲ್ಪಿಸಲಿವೆ.

ಗ್ರಾಮೀಣ ಭಾಗದ ಮೂಲಸೌಕರ್ಯಗಳ ಬಲವರ್ಧನೆಯೇ ನಮ್ಮ ಮೊದಲ ಆದ್ಯತೆ. ಜನರ ಆಶೋತ್ತರಗಳಿಗೆ ಸ್ಪಂದಿಸುತ್ತಾ, ಯಮಕನಮರಡಿ ಕ್ಷೇತ್ರದ ಪ್ರಗತಿಗಾಗಿ ನಮ್ಮ ಈ ಸೇವಾ ಪಯಣ ನಿರಂತರವಾಗಿ ಮುಂದುವರಿಯಲಿದೆ ಎಂದು ರಾಹುಲ್ ಜಾರಕಿಹೊಳಿ ಹೇಳಿದರು.

— Ningappa

ಲಿಂಗಸಗೂರು: ನವೆಂಬರ್ 21 ರಂದು ಚಿತ್ತಾಪೂರದಲ್ಲಿ ಪ್ರಜಾಸೇವೆ ಆಂದೋಲನ ಸಭೆ - ಶಾಸಕರ ಅಧ್ಯಕ್ಷತೆಯಲ್ಲಿ ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ರವರೆಗೆ - ಸಾರ್ವಜನಿಕರು, ರೈತರು ಅಹವಾಲುಗಳೊಂದಿಗೆ ಪಾಲ್ಗೊಳ್ಳಲು ತಹಶೀಲ್ದಾರ್ ಕರೆ



ಲಿಂಗಸಗೂರು: ನವೆಂಬರ್ 21 ರಂದು ಚಿತ್ತಾಪೂರದಲ್ಲಿ ಪ್ರಜಾಸೇವೆ ಆಂದೋಲನ ಸಭೆ

ಲಿಂಗಸಗೂರು: ಕರ್ನಾಟಕ ಸರ್ಕಾರ, ತಹಶೀಲ್ದಾರರು ಹಾಗೂ ತಾಲೂಕು ದಂಡಾಧಿಕಾರಿಗಳ ಕಾರ್ಯಾಲಯ ಲಿಂಗಸಗೂರು ವತಿಯಿಂದ ದಿನಾಂಕ 18/11/2026 ರಂದು ಪ್ರಜಾಸೇವೆ ಆಂದೋಲನ ಸಭೆಗಳನ್ನು ಆಯೋಜಿಸುವ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದೆ.

ಸರ್ಕಾರದ ಉಪ ಕಾರ್ಯದರ್ಶಿ ಪ್ರಜಾ ಸೇವಾ ಇಲಾಖೆ ಬೆಂಗಳೂರು ಇವರ ಪತ್ರ ಸಂ.ಕಂ.ಸಿ.ಆಸು.ಇ.33.2026-27 ದಿನಾಂಕ 28/08/2026 ಮತ್ತು ಮಾನ್ಯ ಜಿಲ್ಲಾಧಿಕಾರಿಗಳು ರಾಯಚೂರು ಇವರ ಪತ್ರ ಸಂ.ಕಂ.ಪಿ.ಜಿ.ಸಿ.596/26-27 ದಿನಾಂಕ 18/08/2026 ರಂತೆ, ಪ್ರತಿ ತಿಂಗಳು ಎಲ್ಲಾ 2ನೇ ಶನಿವಾರ ಹಾಗೂ 4ನೇ ಶನಿವಾರ ಸೇರಿದಂತೆ ತಾಲೂಕು ಮಟ್ಟದ ಹಾಗೂ ಹೋಬಳಿ ಮಟ್ಟದಲ್ಲಿ ಪ್ರಜಾ ಸೇವೆ ಆಂದೋಲನ ಸಭೆಗಳನ್ನು ಆಯೋಜಿಸಬೇಕೆಂದು ಮತ್ತು ಪ್ರತಿ ತಿಂಗಳ 1ನೇ ಶನಿವಾರ ಹಾಗೂ 3ನೇ ಶನಿವಾರ ಆಯಾ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಮತ್ತು ಸ್ಥಳೀಯ ಶಾಸಕರ ಉಪಸ್ಥಿತಿಯಲ್ಲಿ ಎಲ್ಲಾ ತಾಲೂಕು ಮಟ್ಟದಲ್ಲಿ ಪ್ರಜಾಸೇವೆ ಆಂದೋಲನ ನಡೆಸಬೇಕೆಂದು ಸೂಚಿಸಿರುತ್ತಾರೆ.

ಅದರಂತೆ ದಿನಾಂಕ 21/11/2026 ರಂದು ಪ್ರಜಾಸೇವೆ ಆಂದೋಲನ ಸಭೆಯನ್ನು ಮಾನ್ಯ ಶಾಸಕರು ಲಿಂಗಸಗೂರು ರವರ ಅಧ್ಯಕ್ಷತೆಯಲ್ಲಿ ಚಿತ್ತಾಪೂರ ಗ್ರಾಮದ ಗ್ರಾಮ ಪಂಚಾಯತ ಆವರಣದಲ್ಲಿ ಬೆಳಿಗ್ಗೆ 11-00 ರಿಂದ ಮಧ್ಯಾಹ್ನ 3-00 ಗಂಟೆಗೆ ವರೆಗೆ ಏರ್ಪಡಿಸಲಾಗಿದೆ.

ನೀಡಿದ ಸಚಿವ ಪುಟ್ಟರಂಗಶೆಟ್ಟಿ - ಕರ್ತವ್ಯಕ್ಕೆ ಗೈರಾದ ಉಪನಿರ್ದೇಶಕರಿಗೆ ನೋಟಿಸ್ ನೀಡಲು ಸೂಚನೆ - ಅವ್ಯವಸ್ಥೆ, ಸ್ವಚ್ಛತೆಯಿಲ್ಲದ ಶೌಚಾಲಯ ಕಂಡು ಅಸಮಾಧಾನ



ದಿಢೀರ್ ಪಶು ಆಸ್ಪತ್ರೆಗೆ ಭೇಟಿ ನೀಡಿದ ಸಚಿವ ಪುಟ್ಟರಂಗಶೆಟ್ಟಿ - ಕರ್ತವ್ಯಕ್ಕೆ ಗೈರಾದ ಉಪನಿರ್ದೇಶಕರಿಗೆ ನೋಟಿಸ್ ನೀಡಲು ಸೂಚನೆ

ಬೆಂಗಳೂರು: ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಸಚಿವ ಪುಟ್ಟರಂಗಶೆಟ್ಟಿ ಅವರು ಬೆಂಗಳೂರಿನ ಕಂಟೋನ್ಮೆಂಟ್‌ನಲ್ಲಿರುವ ಪಶು ವೈದ್ಯಕೀಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿ ಆಸ್ಪತ್ರೆಯ ವಿವಿಧ ವಿಭಾಗಗಳ ಕಾರ್ಯನಿರ್ವಹಣೆ ಹಾಗೂ ಮೂಲಸೌಕರ್ಯಗಳನ್ನು ಪರಿಶೀಲಿಸಿದರು.

ಆಸ್ಪತ್ರೆಯ ಸ್ಕ್ಯಾನಿಂಗ್ ಕೊಠಡಿ, ಶಸ್ತ್ರಚಿಕಿತ್ಸಾ ಕೊಠಡಿ ಹಾಗೂ ಔಷಧ ವಿತರಣಾ ವಿಭಾಗಗಳಿಗೆ ಭೇಟಿ ನೀಡಿದ ಸಚಿವರು, ಅಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಆಸ್ಪತ್ರೆಯ ಅವ್ಯವಸ್ಥೆ, ನಿಂತುಹೋಗಿರುವ ಗಡಿಯಾರ ಹಾಗೂ ಸ್ವಚ್ಛತೆಯಿಲ್ಲದ ಶೌಚಾಲಯಗಳನ್ನು ಕಂಡು ಅಸಮಾಧಾನ ವ್ಯಕ್ತಪಡಿಸಿದರು.

ಇದೇ ವೇಳೆ, ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗದ ಉಪನಿರ್ದೇಶಕ ಡಾ. ಚಂದ್ರಶೇಖರ್ ಅವರ ಗೈರುಹಾಜರಿಯನ್ನು ಗಂಭೀರವಾಗಿ ಪರಿಗಣಿಸಿದ ಸಚಿವರು, ಕರ್ತವ್ಯ ನಿರ್ಲಕ್ಷ್ಯದ ಕುರಿತು ನೋಟಿಸ್ ಜಾರಿಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವುದರ ಜೊತೆಗೆ ಜಾನುವಾರುಗಳಿಗೆ ಗುಣಮಟ್ಟದ ಚಿಕಿತ್ಸೆ ದೊರೆಯುವಂತೆ ನೋಡಿಕೊಳ್ಳಬೇಕು. ಇಲಾಖೆಯಲ್ಲಿ ಶಿಸ್ತು, ಸಮಯಪಾಲನೆ ಹಾಗೂ ಜವಾಬ್ದಾರಿಯುತ ಕಾರ್ಯನಿರ್ವಹಣೆ ನಮ್ಮ ಆದ್ಯತೆಯಾಗಬೇಕು ಎಂದು ಸಚಿವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಚಿವರ ಭೇಟಿಯ ಸಂದರ್ಭದಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಆಯುಕ್ತ ಲಿಂಗರಾಜು, ಆಪ್ತ ಕಾರ್ಯದರ್ಶಿ ಡಾ. ರಾಜೀವ್ ಎನ್. ಕೂಲೇರ ಹಾಗೂ ಆಸ್ಪತ್ರೆಯ ಪಶುವೈದ್ಯರು ಉಪಸ್ಥಿತರಿದ್ದರು.

— Ningappa

ಪ್ರಾರ್ಥನಾ ಶಾಲೆಯಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಜಾಗೃತಿ ಅಭಿಯಾನ - ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆ ಪಿ.ಎಸ್.ಐ ಹಾಗೂ ANTF ಪೊಲೀಸ್ ತಂಡದಿಂದ ವಿದ್ಯಾರ್ಥಿಗಳಿಗೆ ಮಾಹಿತಿ



ಪ್ರಾರ್ಥನಾ ಶಾಲೆಯಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಜಾಗೃತಿ ಅಭಿಯಾನ

ರಾಯಚೂರು: ನಗರದ ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆ ವ್ಯಾಪ್ತಿಯ ಪ್ರಾರ್ಥನಾ ಶಾಲೆಯಲ್ಲಿ ಪಿ.ಎಸ್.ಐ ಮಾರ್ಕೆಟ್ ಯಾರ್ಡ್ ಠಾಣೆ ರವರು ಹಾಗೂ ANTF ಪೊಲೀಸ್ ತಂಡದ ವತಿಯಿಂದ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮ ಮತ್ತು ಜಾಗೃತಿ ಅಭಿಯಾನ ಕಾರ್ಯಕ್ರಮ ಮಾಡಿದರು.

ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಮಾಹಿತಿ ನೀಡಿ, ಮಾದಕ ವಸ್ತುಗಳಿಂದ ದೂರವಿರಲು ಜಾಗೃತಿ ಮೂಡಿಸಲಾಯಿತು.

— Ningappa

ಬೋರ್‌ವೆಲ್ ಮೋಟಾರ್ - ಕುಡಿಯುವ ನೀರಿಗಾಗಿ ಬೀದಿಗಿಳಿದ ಯಲಗಟ್ಟಾ ಗ್ರಾಮದ ಮಹಿಳೆಯರು - ಪಂಚಾಯಿತಿ ನಿರ್ಲಕ್ಷ್ಯಕ್ಕೆ ಬೇಸತ್ತ ಜನತೆ - ತಾಯಮ್ಮನ ಬೋರ್ ಮುಂದೆ ಕಾದು ಕುಳಿತ ಅಂಬೇಡ್ಕರ್ ನಗರದ ನಿವಾಸಿಗಳು



ಲಿಂಗಸುಗೂರು: ತಾಲೂಕಿನ ರೋಡಲಬಂಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯಲಗಟ್ಟಾ ಗ್ರಾಮದಲ್ಲಿ ಕುಡಿಯುವ ನೀರಿನ ಹಾಹಾಕಾರ ಮುಗಿಲು ಮುಟ್ಟಿದ್ದು, ಗ್ರಾಮ ಪಂಚಾಯಿತಿ ಆಡಳಿತ ವ್ಯವಸ್ಥೆಯ ವಿರುದ್ಧ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ರಾಮದ ಒಂದನೇ ವಾರ್ಡ್‌ನ ಅಂಬೇಡ್ಕರ್ ನಗರದ ಬೋರ್‌ವೆಲ್ ಮೋಟಾರ್ ಸುಟ್ಟು ಹೋಗಿ ಬರೋಬ್ಬರಿ 25 ದಿನಗಳು ಕಳೆದಿವೆ. ಆದರೆ, ಇದುವರೆಗೂ ಪಂಚಾಯಿತಿ ಅಧಿಕಾರಿಗಳಾಗಲಿ ಅಥವಾ ಜನಪ್ರತಿನಿಧಿಗಳಾಗಲಿ ಮೋಟಾರ್ ದುರಸ್ತಿಗೊಳಿಸುವ ಗೋಜಿಗೆ ಹೋಗಿಲ್ಲ. ಅಧಿಕಾರಿಗಳ ಈ ದಿವ್ಯ ನಿರ್ಲಕ್ಷ್ಯದಿಂದಾಗಿ ಅಂಬೇಡ್ಕರ್ ನಗರ ಹಾಗೂ ಕೆಂಚಮ್ಮನ ಓಣಿಯ ನಿವಾಸಿಗಳು ಹನಿ ನೀರಿಗೂ ಪರದಾಡುವಂತಾಗಿದೆ.

ಬಡಾವಣೆಯ ಮಹಿಳೆಯರು, ವೃದ್ಧರು ಮತ್ತು ಮಕ್ಕಳು ತಮ್ಮ ದೈನಂದಿನ ಕೆಲಸಗಳನ್ನು ಬಿಟ್ಟು, ಊರಿನ ಮತ್ತೊಂದು ಭಾಗದಲ್ಲಿರುವ ತಾಯಮ್ಮನ ಬೋರ್‌ವೆಲ್ ಬಳಿ ಕೊಡಗಳನ್ನು ಹಿಡಿದು ಗಂಟೆಗಟ್ಟಲೆ ಕಾದು ಕುಳಿತು ನೀರು ತರುವ ದುಸ್ಥಿತಿ ನಿರ್ಮಾಣವಾಗಿದೆ.

ಮೋಟಾರ್ ಸುಟ್ಟು 25 ದಿನಗಳಾದರೂ ಪಂಚಾಯಿತಿ ಸಿಬ್ಬಂದಿ ಕ್ಯಾರೆ ಎನ್ನುತ್ತಿಲ್ಲ. ಈ ಬಗ್ಗೆ ಹಲವು ಬಾರಿ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ತಕ್ಷಣವೇ ಸಂಬಂಧಪಟ್ಟ ಮೇಲಧಿಕಾರಿಗಳು ಎಚ್ಚೆತ್ತುಕೊಂಡು ಸುಟ್ಟುಹೋದ ಮೋಟಾರ್ ದುರಸ್ತಿಗೊಳಿಸಬೇಕು ಮತ್ತು ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಇಲ್ಲದಿದ್ದರೆ ಪಂಚಾಯಿತಿ ಕಚೇರಿಗೆ ಮುತ್ತಿಗೆ ಹಾಕಿ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಬಡಾವಣೆಯ ಮಹಿಳೆಯರು ಎಚ್ಚರಿಕೆ ನೀಡಿದ್ದಾರೆ.

— Ningappa

ರೆವರೆಂಡ್ ಡಾ. ಇಮಾನುವೇಲ್ ದೇವಮಣಿ ಅವರಿಗೆ ರಾಜ್ಯಮಟ್ಟದ ಪದಾಧಿಕಾರಿ ನೇಮಕಮಸಿಹದಳ್ ಫೌಂಡೇಶನ್ ಆಫ್ ಇಂಡಿಯಾದ ಕರ್ನಾಟಕ ರಾಜ್ಯ ಹಿರಿಯ ಉಪಾಧ್ಯಕ್ಷರಾಗಿ ನೇಮಕ; ಗಣ್ಯರಿಂದ ಸನ್ಮಾನ



ದೇವದುರ್ಗ ಬ್ರೇಕಿಂಗ್ ನ್ಯೂಸ್

ರೆವರೆಂಡ್ ಡಾ. ಇಮಾನುವೇಲ್ ದೇವಮಣಿ ಅವರಿಗೆ ರಾಜ್ಯಮಟ್ಟದ ಪದಾಧಿಕಾರಿ ನೇಮಕ

ಮಸಿಹದಳ್ ಫೌಂಡೇಶನ್ ಆಫ್ ಇಂಡಿಯಾದ ಕರ್ನಾಟಕ ರಾಜ್ಯ ಹಿರಿಯ ಉಪಾಧ್ಯಕ್ಷರಾಗಿ ನೇಮಕ; ಗಣ್ಯರಿಂದ ಸನ್ಮಾನ

ದೇವದುರ್ಗ: ದೇವದುರ್ಗ ಪಟ್ಟಣದ ಎಜಿ ಚರ್ಚಿನ ಸಭಾಪಾಲಕರಾದ ರೆವರೆಂಡ್ ಡಾ. ಇಮಾನುವೇಲ್ ದೇವಮಣಿ ಅವರು ಮಸಿಹದಳ್ ಫೌಂಡೇಶನ್ ಆಫ್ ಇಂಡಿಯಾದ ಕರ್ನಾಟಕ ರಾಜ್ಯ ಹಿರಿಯ ಉಪಾಧ್ಯಕ್ಷರಾಗಿ ನೇಮಕಗೊಂಡ ಹಿನ್ನೆಲೆಯಲ್ಲಿ ನ.16ರಂದು ಸಂಜೆ ದೇವದುರ್ಗ ಪಟ್ಟಣದಲ್ಲಿ ಸನ್ಮಾನ ಕಾರ್ಯಕ್ರಮ ನಡೆಯಿತು.

ಎಂಆರ್‌ಎಚ್‌ಎಸ್ ರಾಯಚೂರು ಜಿಲ್ಲಾ ಅಧ್ಯಕ್ಷರಾದ ಹನುಮಂತಪ್ಪ ಮುನ್ನಾಪೋರಿ ಅವರ ಸಮ್ಮುಖದಲ್ಲಿ ರೆವರೆಂಡ್ ಡಾ. ಇಮಾನುವೇಲ್ ದೇವಮಣಿ ಅವರನ್ನು ಗಣ್ಯರು ಗೌರವಿಸಿ ಅಭಿನಂದಿಸಿದರು. ಬಹುಜನ ಸಮಾಜ ಪಕ್ಷದ ರಾಜ್ಯ ಕಾರ್ಯದರ್ಶಿ ನರಸಣ್ಣ ಗೌಡ ಬಿ. ಗಣೇಕಲ್, ಶರಣಬಸವ ಮೇದರ, ಗೋಳು ಈಶಪ್ಪ ನಂದಿಹಾಳ, ದೇವರಾಜ್, ಪೊಲೀಸ್ ಇಂಟೆಲಿಜೆನ್ಸ್ ಡಿವಿಎಸ್‌ಎನ್ ಮೂರ್ತಿ, ವಿಭಾಗೀಯ ಉಪಾಧ್ಯಕ್ಷ ರಂಗಪ್ಪ ಬಲಿದವ್, ಎಂಆರ್‌ಎಚ್‌ಎಸ್ ದೇವದುರ್ಗ ನಗರ ಘಟಕದ ಅಧ್ಯಕ್ಷ ವಿಜಯಕುಮಾರ ಬಲಿದವ್, ಚನ್ನಬಸವ ಬಂಡಾರಿ, ಲಕ್ಷ್ಮಣ ಮಸರೆಕಲ್, ಶಿವರಾಜ ಕೊಪ್ಪರ ಹಾಗೂ ಚಿದಾನಂದ ಗಬ್ಬೂರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

— Khaja Hussain

ಚಲುವಾದಿ ದೊಡ್ಡಿ ಸರ್ಕಾರಿ ಶಾಲೆಯ ಸಮಸ್ಯೆ ಪರಿಹಾರಕ್ಕೆ ಎಸ್‌ಎಫ್‌ಐ ಮನವಿ



ಜಾಲಹಳ್ಳಿ ಬ್ರೇಕಿಂಗ್ ನ್ಯೂಸ್

ಚಲುವಾದಿ ದೊಡ್ಡಿ ಸರ್ಕಾರಿ ಶಾಲೆಯ ಸಮಸ್ಯೆ ಪರಿಹಾರಕ್ಕೆ ಎಸ್‌ಎಫ್‌ಐ ಮನವಿ

15 ದಿನಗಳಿಂದ ಕುಡಿಯುವ ನೀರಿಲ್ಲ; ಶಾಲಾ ಆವರಣದಲ್ಲಿ ಗಿಡಗಂಟಿಗಳಿಂದ ವಿಷಕಾರಿ ಕ್ರಿಮಿಗಳ ಭೀತಿ

ಗಲಗ: ಗಲಗ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಲುವಾದಿ ದೊಡ್ಡಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳು ಎದುರಿಸುತ್ತಿರುವ ಮೂಲಭೂತ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಎಸ್‌ಎಫ್‌ಐ ತಾಲೂಕು ಕಾರ್ಯದರ್ಶಿ ಸಂತೋಷ ತ್ಯಾಪ್ಲಿ ಆಗ್ರಹಿಸಿದರು.

ಶಾಲೆಯ ಬೋರ್‌ವೆಲ್ ಕಳೆದ ಸುಮಾರು 15 ದಿನಗಳಿಂದ ಕೆಟ್ಟುಹೋಗಿದ್ದು, ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಂತಾಗಿದೆ. ಅಲ್ಲದೆ, ಶಾಲೆಯ ಸುತ್ತಮುತ್ತ ಗಿಡಗಂಟಿಗಳು ಬೆಳೆದು ನಿಂತಿರುವುದರಿಂದ ಹಾವುಗಳು ಹಾಗೂ ವಿಷಕಾರಿ ಕ್ರಿಮಿಕೀಟಗಳು ಶಾಲಾ ಆವರಣಕ್ಕೆ ಪ್ರವೇಶಿಸುವ ಭೀತಿ ಎದುರಾಗಿದೆ. ಇದರಿಂದ ಮಕ್ಕಳ ಆರೋಗ್ಯ ಮತ್ತು ಸುರಕ್ಷತೆಗೆ ಅಪಾಯ ಉಂಟಾಗುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣ ಪಡೆಯುತ್ತಿರುವ ಬಡ ಹಾಗೂ ಗ್ರಾಮೀಣ ಮಕ್ಕಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ಗ್ರಾಮ ಪಂಚಾಯಿತಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಜವಾಬ್ದಾರಿಯಾಗಿದೆ. ಆದರೆ, ಕುಡಿಯುವ ನೀರಿನಂತಹ ಕನಿಷ್ಠ ಸೌಲಭ್ಯವೂ ಇಲ್ಲದಿರುವುದು ವಿಷಾದನೀಯ ಎಂದರು.

ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಶಾಲೆಯ ಬೋರ್‌ವೆಲ್ ದುರಸ್ತಿಗೊಳಿಸಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಶಾಲಾ ಆವರಣದಲ್ಲಿರುವ ಗಿಡಗಂಟಿಗಳನ್ನು ತೆರವುಗೊಳಿಸಿ ಸ್ವಚ್ಛತೆ ಕಾಪಾಡುವುದರ ಜೊತೆಗೆ ಮಕ್ಕಳ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಈ ಕುರಿತು ಎಸ್‌ಎಫ್‌ಐ ಸಂಘಟನೆ ವತಿಯಿಂದ ಗಲಗ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ಸಮಸ್ಯೆಗಳನ್ನು ಶೀಘ್ರ ಪರಿಹರಿಸುವಂತೆ ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ಎಸ್‌ಎಫ್‌ಐ ಅರಕೇರಿ ತಾಲೂಕು ಅಧ್ಯಕ್ಷ ಬಾಬು ಶ್ಯಾನೇರದೊಡ್ಡಿ, ಡಿವೈಎಫ್‌ಐ ತಾಲೂಕು ಕಾರ್ಯದರ್ಶಿ ನಿಂಗಯ್ಯ ಸುಣ್ಣದಕಲ್, ವೆಂಕಟೇಶ್ ದೊರೆ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

— Khaja Hussain

ಕಲ್ಯಾಣಾಧಿಕಾರಿಯನ್ನು ಸೇವೆಯಿಂದ ವಜಾಗೊಳಿಸಲು ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಒತ್ತಾಯ



ರಾಯಚೂರು ಬ್ರೇಕಿಂಗ್ ನ್ಯೂಸ್

ಲಿಂಗಸೂರು ಸಮಾಜ ಕಲ್ಯಾಣಾಧಿಕಾರಿಯನ್ನು ಸೇವೆಯಿಂದ ವಜಾಗೊಳಿಸಲು ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಒತ್ತಾಯ

ವಸತಿ ನಿಲಯಗಳಿಗೆ ಭೇಟಿ ನೀಡದೆ, ವಿದ್ಯಾರ್ಥಿಗಳ ಮೂಲಸೌಕರ್ಯ ಸಮಸ್ಯೆ ನಿರ್ಲಕ್ಷ್ಯ ಆರೋಪ; ಕ್ರಮ ಕೈಗೊಳ್ಳದಿದ್ದರೆ ಧರಣಿ ಎಚ್ಚರಿಕೆ

ರಾಯಚೂರು: 18 ಲಿಂಗಸೂರು ತಾಲೂಕು ಸಮಾಜ ಕಲ್ಯಾಣಾಧಿಕಾರಿ ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರುತ್ತಿದ್ದು, ವಿದ್ಯಾರ್ಥಿಗಳ ವಸತಿ ನಿಲಯಗಳ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿ ಅವರನ್ನು ಕೂಡಲೇ ಸೇವೆಯಿಂದ ವಜಾಗೊಳಿಸುವಂತೆ ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಜಿಲ್ಲಾ ಸಮಿತಿ ವತಿಯಿಂದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ಮನವಿ ಸಲ್ಲಿಸಲಾಯಿತು.

ದಿನಾಂಕ 18-11-2026ರಂದು ಸಲ್ಲಿಸಿದ ಮನವಿಯಲ್ಲಿ, ಲಿಂಗಸೂರು ತಾಲೂಕಿನ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇದೆ. ವಿದ್ಯಾರ್ಥಿಗಳಿಗೆ ಸ್ನಾನ ಮಾಡಲು ಬಿಸಿನೀರಿನ ವ್ಯವಸ್ಥೆ ಇಲ್ಲದೆ ತೊಂದರೆಯಾಗುತ್ತಿದ್ದು, ಬೋರ್‌ವೆಲ್ ನೀರನ್ನೇ ಅಡುಗೆ ಹಾಗೂ ಕುಡಿಯಲು ಬಳಸಲಾಗುತ್ತಿದೆ ಎಂದು ಆರೋಪಿಸಲಾಗಿದೆ.

ಲಿಂಗಸೂರು ತಾಲೂಕು ಸಮಾಜ ಕಲ್ಯಾಣಾಧಿಕಾರಿ ರವೀಂದ್ರ ಅವರು ದೇವದುರ್ಗ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯಲ್ಲಿಯೂ ಮ್ಯಾನೇಜರ್ ಆಗಿ ಕಾರ್ಯನಿರ್ವಹಿಸುತ್ತಿದ್ದು, ಎರಡೂ ಕಡೆಗಳ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸುವಲ್ಲಿ ವಿಫಲರಾಗಿದ್ದಾರೆ. ವಸತಿ ನಿಲಯಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಶೀಲಿಸುತ್ತಿಲ್ಲ ಹಾಗೂ ಕಚೇರಿಗೂ ಸರಿಯಾಗಿ ಹಾಜರಾಗದೆ ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ಮನವಿಯಲ್ಲಿ ದೂರಲಾಗಿದೆ.

ವಸತಿ ನಿಲಯಗಳಲ್ಲಿನ ಸಮಸ್ಯೆಗಳನ್ನು ಕೂಡಲೇ ಪರಿಹರಿಸಿ ವಿದ್ಯಾರ್ಥಿಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು. ಸಂಬಂಧಪಟ್ಟ ಅಧಿಕಾರಿಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ವಸತಿ ನಿಲಯದ ವಿದ್ಯಾರ್ಥಿಗಳೊಂದಿಗೆ ಲಿಂಗಸೂರು ಸಮಾಜ ಕಲ್ಯಾಣ ಇಲಾಖೆಯ ಕಚೇರಿ ಮುಂದೆ ಧರಣಿ ನಡೆಸಲಾಗುವುದು ಎಂದು ಸಂಘಟನೆಯ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಅಂಬೇಡ್ಕರ್ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಮಲ್ಲಪ್ಪ ಗೌಡರು, ಸಿಂಧನೂರು ತಾಲೂಕಾಧ್ಯಕ್ಷ ಎಸ್. ನಿರುಪಾಡಿ, ಲಿಂಗಸೂರು ತಾಲೂಕಾಧ್ಯಕ್ಷ ಮಲ್ಲಿಕಾರ್ಜುನ ಸಜ್ಜಾಪೂರ, ದೇವದುರ್ಗ ತಾಲೂಕು ಉಪಾಧ್ಯಕ್ಷ ದುರುಗಪ್ಪ ಸಮುದ್ರ, ಅಂಬರೀಶ ಯರಮರಸ್, ಮಸ್ಕಿ ತಾಲೂಕಾಧ್ಯಕ್ಷ ರಮೇಶ ಸಿ ಸೇರಿದಂತೆ ಸಂಘಟನೆಯ ಮುಖಂಡರು ಇದ್ದರು.

ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

— Khaja Hussain

ರಾಮದುರ್ಗ ಗ್ರಾ.ಪಂ. ವ್ಯಾಪ್ತಿಯ ನಾಲ್ಕು ಗ್ರಾಮಗಳನ್ನು ದೇವದುರ್ಗ ತಾಲ್ಲೂಕಿನಲ್ಲೇ ಮುಂದುವರಿಸಲು ಪರಿಶೀಲನೆಗೆ ಜಿಲ್ಲಾಧಿಕಾರಿ ಸೂಚನೆ



ದೇವದುರ್ಗ ಬ್ರೇಕಿಂಗ್ ನ್ಯೂಸ್

ರಾಮದುರ್ಗ ಗ್ರಾ.ಪಂ. ವ್ಯಾಪ್ತಿಯ ನಾಲ್ಕು ಗ್ರಾಮಗಳನ್ನು ದೇವದುರ್ಗ ತಾಲ್ಲೂಕಿನಲ್ಲೇ ಮುಂದುವರಿಸಲು ಪರಿಶೀಲನೆಗೆ ಜಿಲ್ಲಾಧಿಕಾರಿ ಸೂಚನೆ

ಸ್ಥಳ ಪರಿಶೀಲನೆ ನಡೆಸಿ ನಿಯಮಾನುಸಾರ ವರದಿ ಸಲ್ಲಿಸಲು ಅಧಿಕಾರಿಗಳಿಗೆ ನಿರ್ದೇಶನ

ದೇವದುರ್ಗ: ಹೊಸದಾಗಿ ರಚನೆಯಾದ ಅರಕೇರಾ ತಾಲ್ಲೂಕಿಗೆ ಸೇರ್ಪಡೆಗೊಂಡಿರುವ ರಾಮದುರ್ಗ ಗ್ರಾಮ ಪಂಚಾಯತ್ ವ್ಯಾಪ್ತಿಯ ನಾಲ್ಕು ಗ್ರಾಮಗಳನ್ನು ಮೊದಲಿನಂತೆ ದೇವದುರ್ಗ ತಾಲ್ಲೂಕಿನಲ್ಲಿಯೇ ಮುಂದುವರಿಸುವ ಕುರಿತು ಪರಿಶೀಲನೆ ನಡೆಸಿ ವರದಿ ಸಲ್ಲಿಸುವಂತೆ ರಾಯಚೂರು ಜಿಲ್ಲಾಡಳಿತ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದೆ.

ರಾಮದುರ್ಗ ಗ್ರಾಮ ಪಂಚಾಯತ್ ವ್ಯಾಪ್ತಿಯ ಸುಂಕೇಶ್ವರಹಾಳ, ರಾಮದುರ್ಗ, ಕಾಕರಗಲ್ ಹಾಗೂ ಚಿನ್ನಾಪುರ ಗ್ರಾಮಗಳನ್ನು ಅರಕೇರಾ ತಾಲ್ಲೂಕಿಗೆ ಸೇರ್ಪಡೆಗೊಳಿಸುವ ಸಂದರ್ಭದಲ್ಲಿ ಸ್ಥಳೀಯ ಜನರ ಅಭಿಪ್ರಾಯ ಪಡೆಯಲಾಗಿಲ್ಲ ಎಂಬುದು ಸಾರ್ವಜನಿಕರ ಪ್ರಮುಖ ಆಕ್ಷೇಪವಾಗಿದೆ.

ಅರಕೇರಾ ತಾಲ್ಲೂಕು ಕೇಂದ್ರಕ್ಕೆ ಈ ಗ್ರಾಮಗಳಿಂದ ಸುಮಾರು 60 ಕಿ.ಮೀ. ದೂರವಿದ್ದು, ಸಮರ್ಪಕ ಸಾರಿಗೆ ವ್ಯವಸ್ಥೆಯೂ ಇಲ್ಲದ ಕಾರಣ ರೈತರು ಹಾಗೂ ಸಾರ್ವಜನಿಕರು ಸರ್ಕಾರಿ ಕಚೇರಿಗಳ ಕೆಲಸಗಳಿಗೆ ತೆರಳಲು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ದೈನಂದಿನ ಆಡಳಿತಾತ್ಮಕ ಕಾರ್ಯಗಳಿಗೂ ಅನಾನುಕೂಲವಾಗುತ್ತಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲ

ಮನವಿಯಲ್ಲಿ, ಲಿಂಗಸೂರು ತಾಲೂಕಿನ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇದೆ. ವಿದ್ಯಾರ್ಥಿಗಳಿಗೆ ಸ್ನಾನ ಮಾಡಲು ಬಿಸಿನೀರಿನ ವ್ಯವಸ್ಥೆ ಇಲ್ಲದೆ ತೊಂದರೆಯಾಗುತ್ತಿದ್ದು, ಬೋರ್‌ವೆಲ್ ನೀರನ್ನೇ ಅಡುಗೆ ಹಾಗೂ ಕುಡಿಯಲು ಬಳಸಲಾಗುತ್ತಿದೆ ಎಂದು ಆರೋಪಿಸಲಾಗಿದೆ.


ಲಿಂಗಸೂರು ತಾಲೂಕು ಸಮಾಜ ಕಲ್ಯಾಣಾಧಿಕಾರಿ ರವೀಂದ್ರ ಅವರು ದೇವದುರ್ಗ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯಲ್ಲಿಯೂ ಮ್ಯಾನೇಜರ್ ಆಗಿ ಕಾರ್ಯನಿರ್ವಹಿಸುತ್ತಿದ್ದು, ಎರಡೂ ಕಡೆಗಳ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸುವಲ್ಲಿ ವಿಫಲರಾಗಿದ್ದಾರೆ. ವಸತಿ ನಿಲಯಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಶೀಲಿಸುತ್ತಿಲ್ಲ ಹಾಗೂ ಕಚೇರಿಗೂ ಸರಿಯಾಗಿ ಹಾಜರಾಗದೆ ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ಮನವಿಯಲ್ಲಿ ದೂರಲಾಗಿದೆ.

ವಸತಿ ನಿಲಯಗಳಲ್ಲಿನ ಸಮಸ್ಯೆಗಳನ್ನು ಕೂಡಲೇ ಪರಿಹರಿಸಿ ವಿದ್ಯಾರ್ಥಿಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು. ಸಂಬಂಧಪಟ್ಟ ಅಧಿಕಾರಿಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ವಸತಿ ನಿಲಯದ ವಿದ್ಯಾರ್ಥಿಗಳೊಂದಿಗೆ ಲಿಂಗಸೂರು ಸಮಾಜ ಕಲ್ಯಾಣ ಇಲಾಖೆಯ ಕಚೇರಿ ಮುಂದೆ ಧರಣಿ ನಡೆಸಲಾಗುವುದು ಎಂದು ಸಂಘಟನೆಯ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಅಂಬೇಡ್ಕರ್ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಮಲ್ಲಪ್ಪ ಗೌಡರು, ಸಿಂಧನೂರು ತಾಲೂಕಾಧ್ಯಕ್ಷ ಎಸ್. ನಿರುಪಾದಿ, ಲಿಂಗಸೂರು ತಾಲೂಕಾಧ್ಯಕ್ಷ ಮಲ್ಲಿಕಾರ್ಜುನ ಸಜ್ಜಾಪೂರ, ದೇವದುರ್ಗ ತಾಲೂಕು ಉಪಾಧ್ಯಕ್ಷ ದುರುಗಪ್ಪ ಸಮುದ್ರ, ಅಂಬರೀಶ ಯರಮರಸ್, ಮಸ್ಕಿ ತಾಲೂಕಾಧ್ಯಕ್ಷ ರಮೇಶ ಸಿ ಬಸವರಾಜ್ ಕಲ್ಮಲ್ ದುರ್ಗೇಶ್ ಮಸ್ಕಿ ಸತೀಶ್ ಕಲ್ಮಲ್ ಸೇರಿದಂತೆ ಸಂಘಟನೆಯ ಮುಖಂಡರು ಇದ್ದರು.

— MAHAMAD WALI QURESHI

ವಿಜಯಪುರ: ರಮೇಶ್ ಜಿಗಜಿಣಗಿ ರಾಹುಲ್ ಗಾಂಧಿ ಆರೋಪಕ್ಕೆ ತೀಕ್ಷ್ಣ ಪ್ರತಿಕ್ರಿಯೆ



ವಿಜಯಪುರ: ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಫೋನ್ ಕದ್ದಾಲಿಕೆ ಕುರಿತು ಮಾಡಿರುವ ಆರೋಪವನ್ನು ಸಂಸದ ರಮೇಶ್ ಜಿಗಜಿಣಗಿ ತೀಕ್ಷ್ಣವಾಗಿ ಖಂಡಿಸಿದರು. ಅವರು ಈ ಆರೋಪವನ್ನು "ರಾಜಕೀಯ ಪ್ರಚಾರದ ಮತ್ತೊಂದು ಹತಾಶ ಪ್ರಯತ್ನ" ಎಂದು ಲೇವಡಿ ಮಾಡಿದರು.

ರಮೇಶ್ ಜಿಗಜಿಣಗಿ ಹೇಳಿದರು, "ಈ ಆರೋಪಕ್ಕೆ ಅವರದೇ ಪಕ್ಷದ ಹಿರಿಯ ನಾಯಕ ಸ್ಯಾಮ್ ಪಿಟ್ರೋಡಾ ಅವರ ಹೇಳಿಕೆಯೇ ತಕ್ಕ ಉತ್ತರ ನೀಡಿದೆ" ಎಂದು, ತಮ್ಮ ಪಕ್ಷದ ಒಳಗಿನ ಸ್ಪಷ್ಟ ದೃಷ್ಟಿಕೋಣವನ್ನು ಸೂಚಿಸಿದರು.

ಈ ಹೇಳಿಕೆಗಳ ನಂತರ, ಪ್ರಧಾನಿಯ ಮೋದಿಯವರ ಫೋನ್ ಕದ್ದಾಲಿಕೆ ಸಂಬಂಧಿತ ಯಾವುದೇ ಅಧಿಕೃತ ಟಿಪ್ಪಣಿ ಇಲ್ಲದಿರುವುದನ್ನು ಗಮನಿಸಿ, ವಿಷಯದ ಪ್ರಸ್ತುತ ಪ್ರಭಾವ ಮತ್ತು ರಾಜಕೀಯ ಪ್ರಚಾರದ ಸ್ವರೂಪದ ಬಗ್ಗೆ ಚರ್ಚೆ ಮುಂದುವರಿಯುತ್ತಿದೆ.

ರಾಹುಲ್ ಗಾಂಧಿ ಮತ್ತು ರಮೇಶ್ ಜಿಗಜಿಣಗಿ ನಡುವಿನ ಈ ತೀವ್ರ ಮಾತುಕತೆ, ಸ್ಥಳೀಯ ರಾಜಕೀಯ ವಾತಾವರಣದಲ್ಲಿ ಹೊಸ ಚರ್ಚೆ ವಿಷಯವನ್ನು ಹುಟ್ಟಿಸಿದೆ, ಮತ್ತು ಪಕ್ಷಗಳ ನಡುವೆ ಸ್ಪಷ್ಟವಾದ ವ್ಯತ್ಯಾಸವನ್ನು ತೋರಿಸಿದೆ.

— YALLAPPA RAGATE (PATIL)

POLITICS

ಬಿಜೆಪಿ ಎಂಎಲ್‌ಎ ಅಶೋಕ್ ಅವರ ದೊಡ್ಡ ಹೇಳಿಕೆ




ಬಿಜೆಪಿ ರಾಜ್ಯಸಭಾ ಸದಸ್ಯ ಅಶೋಕ್ ಅವರು ಇತ್ತೀಚೆಗೆ ನೀಡಿದ ದೊಡ್ಡ ಹೇಳಿಕೆಯು ರಾಜಕೀಯ ವಲಯದಲ್ಲಿ ಗಮನ ಸೆಳೆದಿದೆ.

ಈ ಹೇಳಿಕೆ ಯಾವ ವಿಷಯಕ್ಕೆ ಸಂಬಂಧಿಸಿದೆ ಎಂಬ ವಿವರಗಳು ಇನ್ನೂ ಸ್ಪಷ್ಟವಾಗಿಲ್ಲ, ಆದರೆ ಪಕ್ಷದ ಒಳಗೆ ಹಾಗೂ ಸಾರ್ವಜನಿಕರಲ್ಲಿ ವಿವಿಧ ಅಭಿಪ್ರಾಯಗಳು ಮೂಡಿವೆ. ವಿರೋಧ ಪಕ್ಷದ ಪ್ರತಿನಿಧಿಗಳು ಈ ಹೇಳಿಕೆಯ ಪರಿಣಾಮಗಳ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ.

— YALLAPPA RAGATE (PATIL)

LOCAL

ತದ್ದೇವಾಡಿ ಗ್ರಾಮದಲ್ಲಿ ಎರಡು ವರ್ಷಗಳ ದಾಳಿಯ ನಂತರ ಚಿರತೆ ಇಂದು ಸೆರೆಯಾಗಿದೆ



ತದ್ದೇವಾಡಿ ಗ್ರಾಮದಲ್ಲಿ ಎರಡು ವರ್ಷಗಳಿಂದ ದಾಳಿ ಮಾಡುತ್ತಿದ್ದ ಚಿರತೆ ಇಂದು ಸೆರೆಯಾಗಿದೆ. ಸ್ಥಳೀಯ ಅಧಿಕಾರಿಗಳು ಮತ್ತು ವನ್ಯಜೀವಿ ಇಲಾಖೆಯ ಸಹಾಯದಿಂದ ಚಿರತೆ ಹಿಡಿಯಲ್ಪಟ್ಟಿದೆ.

ಈ ಚಿರತೆ ಕಳೆದ ಎರಡು ವರ್ಷಗಳಿಂದ ಗ್ರಾಮಸ್ಥರಿಗೆ ಭಯ ಹುಟ್ಟಿಸುತ್ತಿತ್ತು, ವಿಶೇಷವಾಗಿ ರಾತ್ರಿ ಸಮಯದಲ್ಲಿ. ಅನೇಕ ಬಾರಿ ಹತ್ತಿರದ ಮನೆಗಳ ಮೇಲೆ ದಾಳಿ ಮಾಡಿದ್ದು, ಕೆಲವು ಕುಟುಂಬಗಳಿಗೆ ಹಾನಿ ಉಂಟುಮಾಡಿತ್ತು.

ಫಾರೆಸ್ಟ್ ಡಿಪಾರ್ಟ್‌ಮೆಂಟ್‌ನ ಸಿಬ್ಬಂದಿ ಮತ್ತು ಸ್ಥಳೀಯ ಸ್ವಯಂಸೇವಕರು ಸಮನ್ವಯದಿಂದ ಕಾರ್ಯನಿರ್ವಹಿಸಿ, ಚಿರತೆಯನ್ನು ಸುರಕ್ಷಿತವಾಗಿ ಬಂಧಿಸಿದರು. ಬಂಧನದ ನಂತರ, ಚಿರತೆಯನ್ನು ವನ್ಯಜೀವಿ ಸಂರಕ್ಷಣಾ ಕೇಂದ್ರಕ್ಕೆ ವರ್ಗಾಯಿಸಲಾಗುವುದು.

— YALLAPPA RAGATE (PATIL)

ನಿರ್ಗತಿಕ ವೃದ್ಧೆಗೆ ಕಾರುಣ್ಯ ನೆಲೆ ಆಶ್ರಯ - ಉಮಲೂಟಿಯಲ್ಲಿ ದಿನಗಳಿಂದ ವಾಸವಿದ್ದ 67 ವರ್ಷದ ಲಕ್ಷ್ಮಿ, ಅವರನ್ನು ಸಿಂಧನೂರಿನ ಕಾರುಣ್ಯ ನೆಲೆ ವೃದ್ಧಾಶ್ರಮಕ್ಕೆ ಕರೆತಂದು ಆಶ್ರಯ - ಕುಟುಂಬ ಪತ್ತೆ ಹಚ್ಚಿ ಮನೆಗೆ ಸೇರಿಸುವ ಪ್ರಯತ್ನ - ಡಾ. ಚನ್ನಬಸವ ಸ್ವಾಮಿ ಹಿರೇಮಠ



ನಿರ್ಗತಿಕ ವೃದ್ಧೆಗೆ ಕಾರುಣ್ಯ ನೆಲೆ ಆಶ್ರಯ

ಪೊಲೀಸ್ ಠಾಣೆ ವ್ಯಾಪ್ತಿಗೆ ಬರುವ ಉಮಲೂಟಿ ಗ್ರಾಮದಲ್ಲಿ ಸುಮಾರು ದಿನಗಳಿಂದ ವಾಸವಾಗಿದ್ದ ನಿರ್ಗತಿಕ ವೃದ್ಧೆ ಲಕ್ಷ್ಮಿ ಗಂ. ಪಂಪನಗೌಡ ಸಾ. ಬೆಳ್ಳಿಗನೂರು ವಯಸ್ಸು 67 ಇವರನ್ನು ಉಮಲೂಟಿ ಗ್ರಾಮಸ್ಥರ ಮಾಹಿತಿಯ ಮೇರೆಗೆ ಮತ್ತು ತುರುವಿಹಾಳ ಪೊಲೀಸ್ ಠಾಣೆ ಪಿ.ಎಸ್.ಐ. ಅಧಿಕಾರಿಗಳಾದ ಯರಿಯಪ್ಪ ಅಂಗಡಿ ಅವರ ಸೂಚನೆಯಂತೆ ಸಿಂಧನೂರು ನಗರದ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮಕ್ಕೆ ಕರೆತಂದು ಆಶ್ರಯ ನೀಡಲಾಗಿದೆ.

ಈ ಸಂದರ್ಭದಲ್ಲಿ ಉಮಲೂಟಿ ಗ್ರಾಮದಲ್ಲಿ ನಿರ್ಗತಿಕ ವೃದ್ಧೆಯನ್ನು ಸ್ವಚ್ಛಗೊಳಿಸಿ ಆಶ್ರಮದ ಕಾರ್ಯ ಅಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ, ಈ ತಾಯಿಯನ್ನು ನಾವು ಕರೆದುಕೊಂಡು ಹೋಗಿ ತಾತ್ಕಾಲಿಕವಾಗಿ ಆಶ್ರಯ ನೀಡುತ್ತೇವೆ. ನಂತರ ಇವರಿಗೆ ಸಂಬಂಧಪಟ್ಟವರನ್ನು ಪತ್ತೆ ಹಚ್ಚಿ ಇವರಿಗೆ ಕುಟುಂಬ ಇದ್ದರೆ ಮನವೊಲಿಸಿ ಅವರನ್ನು ಅವರ ಮನೆಗೆ ಸೇರಿಸುವ ಪ್ರಯತ್ನ ಮಾಡುತ್ತೇನೆ. ಒಂದು ವೇಳೆ ಇವರಿಗೆ ಯಾರು ಇಲ್ಲ ಎಂದು ಖಚಿತವಾದಾಗ ಮಾತ್ರ ನಾವು ಶಾಶ್ವತವಾಗಿ ಆಶ್ರಯ ನೀಡುತ್ತೇವೆ ಎಂದರು.

ಇಂತಹ ನೊಂದ ನಿರ್ಗತಿಕರನ್ನು ರಕ್ಷಣೆ ಮಾಡುವುದು ನಮ್ಮ ಕಾರುಣ್ಯ ಕುಟುಂಬದ ಮೂಲ ಉದ್ದೇಶವಾಗಿದೆ. ಈ ಎಲ್ಲಾ ಕಾರ್ಯಗಳಿಗೆ ದಾನಿಗಳು ನಮಗೆ ಸಹಾಯ ಸಹಕಾರ ಮಾಡುತ್ತಾ ಸಮಾಜದಲ್ಲಿನ ಅನಾಥ ಎನ್ನುವ ಪದವನ್ನು ಅಳಿಸಿ ಹಾಕುತ್ತಿದ್ದಾರೆ. ಈಗಾಗಲೇ ಆಶ್ರಮದಲ್ಲಿ ಆಶ್ರಯದಾತರುಗಳ ಸಂಖ್ಯೆ ಜಾಸ್ತಿ ಆಗಿರುವುದರಿಂದ ಆಶ್ರಮಕ್ಕೆ ಇನ್ನೂ ಹೆಚ್ಚಿನ ಮಟ್ಟದ ಸಹಾಯದ ಅವಶ್ಯಕತೆ ಇದೆ ಆದ್ದರಿಂದ ದಯಾಳುಗಳಾದ ನಾಡಿನ ಎಲ್ಲಾ ಕರುಣಾಮಯಿ ಮನಸ್ಸುಗಳಲ್ಲಿ ನಾವು ಸಹಾಯಕ್ಕಾಗಿ ವಿನಂತಿಸಿಕೊಳ್ಳುತ್ತಿದ್ದೇವೆ ಎಂದರು.

ಇಷ್ಟು ದಿನಗಳ ಕಾಲ ಈ ತಾಯಿಯನ್ನು ಹಾರೈಕೆ ಮಾಡಿದ ಗ್ರಾಮಸ್ಥರಿಗೆ ಮತ್ತು ವಿಶೇಷವಾಗಿ ಕಾರುಣ್ಯ ಕುಟುಂಬದ ಮಾರ್ಗದರ್ಶಕರಾದ ಸೋಮನಾಥ ಜಾಗೀರ್ ದಾರ್ ಇವರಿಗೆ ನಮ್ಮ ಕರುಣೆಯ ಕಾರುಣ್ಯ ಕುಟುಂಬದ ವತಿಯಿಂದ ಹೃದಯಪೂರ್ವಕ ಧನ್ಯವಾದಗಳು ಎಂದು ಮಾತನಾಡಿದರು.

ಈ ಸಮಯದಲ್ಲಿ ಆಶ್ರಮದ ಸಿಬ್ಬಂದಿಗಳಾದ ಮರಿಯಪ್ಪ, ಹರ್ಷವರ್ಧನ, ವಿದ್ಯಾಶ್ರೀ ಹಾಗೂ ಉಮಲೂಟಿಯ ಗ್ರಾಮಸ್ಥರು ಮತ್ತು ತುರುವಿಹಾಳ ಪೊಲೀಸ್ ಠಾಣೆಯ ಪೊಲೀಸರು ಉಪಸ್ಥಿತರಿದ್ದರು.

— Ningappa

ತದ್ದೇವಾಡಿ ಗ್ರಾಮದಲ್ಲಿ ಎರಡು ವರ್ಷಗಳ ದಾಳಿಯಲ್ಲಿದ್ದ ಚಿರತೆ ಇಂದು ಸೆರೆಹಿಡಿಯಲಾಗಿದೆ



ತದ್ದೇವಾಡಿ ಗ್ರಾಮದಲ್ಲಿ ಎರಡು ವರ್ಷಗಳ ಕಾಲ ಜನಸಮುದಾಯದ ಮೇಲೆ ಅನೇಕ ದಾಳಿಗಳು ನಡೆಸಿದ ಚಿರತೆಯನ್ನು ಇಂದು ಗ್ರಾಮ ಪಂಚಾಯಿತಿ ಮತ್ತು ಕಾಡು ಸಂರಕ್ಷಣಾ ಇಲಾಖೆಯ ಸಿಬ್ಬಂದಿ ಯಶಸ್ವಿಯಾಗಿ ಸೆರೆಹಿಡಿದರು.

ಇದಕ್ಕೂ ಮುನ್ನ ಚಿರತೆ ಗ್ರಾಮವಾಸಿಗಳ ಮನೆಗಳ ಹತ್ತಿರ ಪ್ರವೇಶಿಸಿ, ಪಶುಮೃಗಗಳಿಗೂ ಹಾನಿ ಮಾಡಿತ್ತು; ಇದರಿಂದ ಗ್ರಾಮಸ್ಥರಲ್ಲಿ ಭಯ ಮತ್ತು ಆತಂಕ ವೃದ್ಧಿಯಾಯಿತು.

ಸೆರೆಹಿಡಿಯುವ ಕಾರ್ಯದಲ್ಲಿ ಕಾಡು ಸಂರಕ್ಷಣಾ ಅಧಿಕಾರಿಗಳು ಟ್ರಾಪ್‌ಗಳು ಮತ್ತು ನಿಗಾವಹಿಸುವ ಕೇಮೆರಾ ವ್ಯವಸ್ಥೆ ಬಳಸಿದರು; ಪ್ರಾತಃಕಾಲದಲ್ಲಿ ಚಿರತೆ ಟ್ರಾಪ್‌ನಲ್ಲಿ ಸಿಕ್ಕಿತು ಮತ್ತು ಸುರಕ್ಷಿತವಾಗಿ ಪಶು ಸಂರಕ್ಷಣಾ ಕೇಂದ್ರಕ್ಕೆ ಸಾಗಿಸಲಾಯಿತು.

ಸ್ಥಳೀಯ ಪೊಲೀಸ್ ಅಧಿಕಾರಿ ಮತ್ತು ಕಾಡು ಸಂರಕ್ಷಣಾ ಅಧಿಕಾರಿ ಚಿರತೆ ಸೆರೆಹಿಡಿಯುವ ಮೂಲಕ ಗ್ರಾಮಸ್ಥರ ಸುರಕ್ಷತೆ ಖಚಿತಪಡಿಸಲಾಯಿತು ಎಂದು ಹೇಳಿ, ಜನರಿಗೆ ಕಾಡು ಪ್ರಾಣಿಗಳ ಹತ್ತಿರ ಹೋಗುವಾಗ ಎಚ್ಚರಿಕೆಯಿಂದ ನಡೆದುಕೊಳ್ಳುವಂತೆ ಸೂಚಿಸಿದರು.

ಭವಿಷ್ಯದಲ್ಲಿ ಕಾಡು ಪ್ರಾಣಿಗಳ ಮಾನವ ವಸತಿಗಳ ಸಮೀಪದ ಸಂಚಲನವನ್ನು ಕಡಿಮೆ ಮಾಡಲು, ಕಾಡು ಸಂರಕ್ಷಣಾ ಇಲಾಖೆ ಹೆಚ್ಚುವರಿ ನಿಗಾವಹಿಸುವ ವ್ಯವಸ್ಥೆ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವ ಯೋಜನೆ ಹೊಂದಿದೆ.

— YALLAPPA RAGATE (PATIL)